ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 19–12–2014

## ಪತ್ರಿಕಾ ಪ್ರಕಟಣೆ

# ವಿಧಾನ ಪರಿಷತ್ತಿನಲ್ಲಿ 7 ವಿಧೇಯಕಗಳಿಗೆ ಅಂಗೀಕಾರ

**ಬೆಳಗಾವಿ:ಡಿಸೆಂಬರ್:19:(ಕರ್ನಾಟಕ ವಾರ್ತೆ):–**

ವಿಧಾನ ಪರಿಷತ್ತಿನಲ್ಲಿಂದು ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿದ 7 ವಿಧೇಯಕಗಳನ್ನು ವಿರೋಧ ಪಕ್ಷದವರ ಧರಣಿಯ ನಡುವೆಯೂ ಸಭಾಪತಿ ಡಿ.ಹೆಚ್. ಶಂಕರಮೂರ್ತಿಯವರು ಧ್ವನಿಮತಕ್ಕೆ ಹಾಕುವ ಮೂಲಕ ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ 2014 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮುಖ್ಯಮಂತ್ರಿ ಶ್ರೀ. ಸಿದ್ದರಾಮಯ್ಯ ಅವರು ಪರಿಷತ್ತಿನ ಅಂಗೀಕಾರಕ್ಕಾಗಿ ಮಂಡಿಸಿದರು.

2014 ನೇ ಸಾಲಿನ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ತಿದ್ದುಪಡಿ ವಿಧೇಯಕ, 2014 ನೇ ಸಾಲಿನ ಭಾರತ ಉತ್ತರಾಧಿಕಾರ ಕರ್ನಾಟಕ ತಿದ್ದುಪಡಿ ವಿಧೇಯಕ ಹಾಗೂ 2014 ನೇ ಸಾಲಿನ ಕರ್ನಾಟಕ ನ್ಯಾಯಾಲಯ ಶುಲ್ಕಗಳು ಮತ್ತು ದಾವೆಗಳ ಮೌಲ್ಯ ನಿರ್ಣಯ ತಿದ್ದುಪಡಿ ವಿಧೇಯಕವನ್ನು ಕಾನೂನು ಸಂಸದೀಯ ವ್ಯವಹಾರಗಳ ಸಚಿವರಾದ ಟಿ.ಬಿ. ಜಯಚಂದ್ರ ಅವರು ಅಂಗೀಕಾರಕ್ಕಾಗಿ ಮಂಡಿಸಿದರು.

2013 ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿಯವರ ಅಂಗೀಕಾರಕ್ಕಾಗಿ ಮಂಡಿಸಿದರು. 2014 ರ ನೇ ಸಾಲಿನ ಕರ್ನಾಟಕ ಶಿಕ್ಷಣ ತಿದ್ದುಪಡಿ ವಿಧೇಯಕವನ್ನು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಕಿಮ್ಮನೆ ರತ್ನಾಕರ ಅವರು ಹಾಗೂ 2014 ನೇ ಸಾಲಿನ ಕರ್ನಾಟಕ ಪುರಸಭೆಗಳು ಕೆಲವು ಕಾನೂನು ತಿದ್ದುಪಡಿ ವಿಧೇಯಕವನ್ನು ಪೌರಾಡಳಿತ ಸಚಿವರ ಬದಲಿಗೆ ಕಾನೂನು ಸಚಿವರು ಪರಿಷತ್ತಿನ ಅಂಗೀಕಾರಕ್ಕಾಗಿ ಮಂಡಿಸಿದರು.

# ಸಾರ್ವಜನಿಕ ಪ್ರಶಂಸೆಗೆ ಒಳಗಾದ ಸುವರ್ಣ ಸೌಧ ಸ್ವಚ್ಛತಾ ನಿರ್ವಹಣೆ

**ಬೆಳಗಾವಿ:ಡಿಸೆಂಬರ್:19:(ಕರ್ನಾಟಕ ವಾರ್ತೆ):–**

ಸುವರ್ಣ ವಿಧಾನಸೌಧದ ಸ್ವಚ್ಚತಾ ಕಾರ್ಯ ನಿರ್ವಹಣೆಯು ಸಾರ್ವತ್ರಿಕ ಪ್ರಶಂಸೆಗೆ ಒಳಗಾಗಿದೆ.

ಅಧಿವೇಶನ ಆರಂಭದ ದಿನದಿಂದಲೂ ನಿತ್ಯವೂ ಸಾವಿರಾರು ಸಾರ್ವಜನಿಕರು ಸುವರ್ಣ ಸೌಧದ ವೀಕ್ಷಣೆಗಾಗಿ ಆಗಮಿಸುತ್ತಿದ್ದಾರೆ. ಹಾಗೆಯೇ ನೂರಾರು ಸಾರ್ವಜನಿಕರು, ಜನ ಪ್ರತಿನಿಧಿಗಳು, ಅಧಿಕಾರಿಗಳು, ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರು, ಮಾಧ್ಯಮ ಪ್ರತಿನಿಧಿಗಳು ಒಳಗೊಂಡಂತೆ ನಿತ್ಯವೂ ಐದು ಸಾವಿರಕ್ಕೂ ಅಧಿಕ ಜನರು ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ಸುವರ್ಣ ಸೌಧವನ್ನು ಸ್ವಚ್ಛವಾಗಿಡುವ ಜವಾಬ್ದಾರಿ ಬೆಳಗಾವಿ ಜಿಲ್ಲೆಯ ಲೋಕೋಪಯೋಗಿ ಇಲಾಖೆಯದಾಗಿದೆ.

ಲೋಕೋಪಯೋಗಿ ಇಲಾಖೆಯು ಸುವರ್ಣ ಸೌಧದ ಸ್ವಚ್ಛತಾ ಕಾರ್ಯಕ್ಕೆ ವಿಶೇಷ ಆದ್ಯತೆ ನೀಡಿದೆ. ಇಲಾಖೆಯು ಇದಕ್ಕಾಗಿ 150 ಕ್ಕೂ ಹೆಚ್ಚು ಸ್ವಚ್ಛತಾ ಸಿಬ್ಬಂದಿಗಳನ್ನು ನಿಯೋಜಿಸಿದೆ. ಬೆಳಗ್ಗೆ 8 ರಿಂದ ರಾತ್ರಿ 11 ರವರೆಗೆ ಪಾಳಯ ರೀತಿಯಲ್ಲಿ ಕಾರ್ಯನಿರ್ವಸಲು ವ್ಯವಸ್ಥೆ ಮಾಡಲಾಗಿದೆ. ಸುಲಭದಲ್ಲಿ ಸಾರ್ವಜನಿಕರಿಗೆ ಕಸ ಹಾಕಲು ಅನುಕೂಲವಾಗುವಂತೆ 380 ಕ್ಕೂ ಅಧಿಕ ತಾತ್ಕಾಲಿಕ ಪ್ಲಾಸ್ಟಿಕ್ ಕಸದ ಬುಟ್ಟಿಗಳನ್ನು ಕಾರಿಡಾರಗಳಲ್ಲಿ ಅಳವಡಿಸಲಾಗಿದೆ. ಸ್ವಯಂ ಪ್ರೇರಣೆಯಿಂದ ಕಸವನ್ನು ಸಾರ್ವಜನಿಕರು ಕಸದ ಬುಟ್ಟಿಗೇ ಹಾಕುವಂತೆ ವ್ಯವಸ್ಥೆ ಮಾಡಲಾಗಿದೆ. ಗೋಡೆ ಕಿಟಕಿ ಬಾಗಿಲಗಳು ಎತ್ತರ ಪ್ರದೇಶದ ಜಾಡುಗಳ (ಜೇಡ ಬಲೆ) ಸ್ವಚ್ಛತೆಗಾಗಿ ಟೆಲಿಸ್ಕೋಪ್ ರಾಡಗಳನ್ನು ಬಳಸಲಾಗುತ್ತಿದೆ. ಕಸದ ವಿಲೇವಾರಿಯನ್ನು ಅತ್ಯಂತ ವೈಜ್ಞಾನಿಕವಾಗಿ ನಿರ್ವಹಿಸುತ್ತಿದ್ದು, ಪ್ರತಿದಿನ ಎಂಟು ಕಂಟೇನರ್‌ಗಿಂತಲೂ ಅಧಿಕ ಕಸ ಉತ್ಪಾದನೆ ಆಗುತ್ತಿದ್ದು, ಇದನ್ನು ವ್ಯವಸ್ಥಿತವಾಗಿ ಸಾಗಾಣೆ ಮೂಲಕ ವಿಲೇವಾರಿ ಮಾಡಲಾಗುತ್ತಿದೆ.

ವೀಕ್ಷಣೆಗೆ ಬರುವ ಸಾರ್ವಜನಿಕರಿಗೆ ಅನುಕೂಲವಾಗಲು ಈ ಬಾರಿ ವಿಶೇಷವಾಗಿ ಲಘು ಉಪಹಾರ-ಪಾನೀಯ, ಕೌಂಟರ್‌ಗಳ ವ್ಯವಸ್ಥೆ ಮಾಡಲಾಗಿದೆ. ಬಾಯಾರಿದ ಸಾರ್ವಜನಿಕರಿಗೆ ಕುಡಿಯುವ ನೀರು ದೊರೆಯುವಂತೆ ಅಲ್ಲಲ್ಲಿ ಮಿನಿರಲ್ ನೀರಿನ ವ್ಯವಸ್ಥೆ ಕಲ್ಪಿಸುವ ಮೂಲಕ ಉಚಿತವಾಗಿ ಕುಡಿಯುವ ನೀರಿನ್ನು ಪೂರೈಸಲಾಗುತ್ತಿದೆ. ಎಲ್ಲೂ ಕಸ ಹರಡದಂತೆ ವ್ಯವಸ್ಥಿತವಾಗಿ ನಿರ್ವಹಿಸಲಾಗುತ್ತಿದೆ.

ಮಧ್ಯಾಹ್ನದ ಊಟದ ವೇಳೆಯಲ್ಲಿ ನೂಕುನುಗ್ಗಲು ತಪ್ಪಿಸಲು ಹೆಚ್ಚು ಕೌಂಟರ್‌ಗಳನ್ನು ಆರಂಭಿಸಲಾಗಿದೆ. ಸರಾಗವಾಗಿ ಎಲ್ಲರೂ ಊಟ ಮಾಡಲು ವ್ಯವಸ್ಥೆ ಮಾಡಲಾಗಿದೆ. ಊಟದ ಆವರಣದಲ್ಲಿ ರುಚಿ ಹಾಗೂ ಶುಚಿತ್ವಕ್ಕೆ ಹೆಚ್ಚಿನ ಆಧ್ಯತೆ ನೀಡಲಾಗಿದೆ.

ನೆಲ ಹಾಸು-ಕಿಟಕಿ ಗಾಜುಗಳಿಗೆ ಹೊಳಪು ನೀಡಲು ಸ್ವಚ್ಛತೆಗಾಗಿ ಅತ್ಯುತ್ತಮವಾದ ಕಂಪನಿಯ ಉತ್ಪನ್ನಗಳನ್ನು ಬಳಕೆ ಮಾಡಲಾಗುತ್ತಿದೆ. ಶೌಚಾಲಯಗಳಲ್ಲೂ ಸಹ ಅಷ್ಟೇ ಸ್ವಚ್ಛತೆಯನ್ನು ನಿರ್ವಹಿಸಲಾಗಿದೆ. ಈ ಕಾರಣಕ್ಕಾಗಿಯೇ ಈ ಬಾರಿ ವಿಶೇಷವಾಗಿ ಸ್ವಚ್ಛತೆಗೆ ಆದ್ಯತೆವಹಿಸಿರುವುದು ಎಲ್ಲರ ಮನವನ್ನು ಗೆದ್ದಿದೆ.

*****************